# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಡಾ:ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **223** |
| ಉತ್ತರಿಸಬೇಕಾದ ದಿನಾಂಕ | : | 28.01.2026 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಬಸವ ವಸತಿ ಯೋಜನೆ, ಡಾ:ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ ಹಾಗೂ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮಂಜೂರಾದ ಒಟ್ಟು ಮನೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)</td><td>2023-24ನೇ ಸಾಲಿನಿಂದ 2025-26ನೇ ಸಾಲಿನವರೆಗೆ ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಬಸವ ವಸತಿ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಯಡಿ ಯಾವುದೇ ಮನೆಗಳ ಗುರಿಯನ್ನು ಸರ್ಕಾರದಿಂದ ಹಂಚಿಕೆ ಮಾಡಿರುವುದಿಲ್ಲ.<br><br>ಕೇಂದ್ರ ಸರ್ಕಾರದ ಯೋಜನೆಯಾದ ಪ್ರಧಾನ ಮಂತ್ರಿ ಅವಾಸ್ ಯೋಜನೆ(ಗ್ರಾ)ರಡಿ 2024-25ನೇ ಸಾಲಿಗೆ ನೀಡಲಾದ ಗುರಿಯಲ್ಲಿ ಬೀದರ್ ಜಿಲ್ಲೆಗೆ 26,287 ಮನೆಗಳಿಗೆ ಮಂಜೂರಾತಿಯನ್ನು ನೀಡಲಾಗಿದೆ.<br><br>ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ:
<table>
<tr><th>ತಾಲ್ಲೂಕು</th><th>ಮಂಜೂರಾತಿ</th></tr>
<tr><td>ಔರಾದ್</td><td>3890</td></tr>
<tr><td>ಬಸವಕಲ್ಯಾಣ</td><td>5286</td></tr>
<tr><td>ಭಾಲ್ಕಿ</td><td>3219</td></tr>
<tr><td>ಬೀದರ್</td><td>3956</td></tr>
<tr><td>ಚಿಟಗುಪ್ಪ</td><td>1882</td></tr>
<tr><td>ಹುಲಸೂರು</td><td>1328</td></tr>
<tr><td>ಹುಮ್ನಾಬಾದ್</td><td>4155</td></tr>
<tr><td>ಕಮಲನಗರ</td><td>2571</td></tr>
<tr><td>ಒಟ್ಟು</td><td>26287</td></tr>
</table>
</td></tr>
<tr><td>ಆ)</td><td>ಸದರಿ ಜಿಲ್ಲೆಯಲ್ಲಿ ಅನೇಕ ಮನೆಗಳು ಹಂತ-ಹಂತವಾಗಿ ಹಣ ಬಿಡುಗಡೆಯಾಗದೆ ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಫಲಾನುಭವಿಗಳಿಗೆ ಬಾಕಿ ಇರುವ ಒಟ್ಟು ಅನುದಾನವೆಷ್ಟು;</td><td>ವಿವಿಧ ವಸತಿ ಯೋಜನೆಗಳಡಿ ಆಯ್ಕೆ ಮಾಡಲಾದ ಅರ್ಹ ಫಲಾನುಭವಿಗಳಿಗೆ ಅವರು ನಿರ್ಮಾಣ ಮಾಡಿಕೊಳ್ಳುತ್ತಿರುವ ವಿವಿಧ ಹಂತದಲ್ಲಿರುವ ಮನೆಗಳಿಗೆ ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗನುಸಾರ ಮತ್ತು ಅನುದಾನದ ಲಭ್ಯತೆಗೆ ಅನುಗುಣವಾಗಿ ನೇರವಾಗಿ ಆಧಾರ್ ಜೋಡಣೆಗೊಂಡ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಖಜಾನೆಯ ತಂತ್ರಾಂಶದ ಮೂಲಕ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಪ್ರಸ್ತುತ ಜಿ.ಪಿ.ಎಸ್ ಪ್ರಗತಿ ಅಪ್‌ಡೇಟ್ ಆಗಿರುವ ಅರ್ಹ ಫಲಾನುಭವಿಗಳಿಗೆ ಯಾವುದೇ ವಸತಿ ಯೋಜನೆಗಳಡಿ ಅನುದಾನ ಬಿಡುಗಡೆ ಮಾಡಲು ಬಾಕಿ ಇರುವುದಿಲ್ಲ.<br><br>2023-24ನೇ ಸಾಲಿನಿಂದ 2025-26ನೇ ಸಾಲಿನವರೆಗೆ ಬೀದರ್ ಜಿಲ್ಲೆಗೆ ಮಂಜೂರಾದ ಮನೆಗಳಿಗೆ ಬಿಡುಗಡೆ ಮಾಡಲಾದ ಅನುದಾನದ ವಿವರಗಳನ್ನು ಕೆಳಗೆ ನೀಡಿದೆ:
<table>
<tr><th>ಕ್ರ ಸಂ</th><th>ಯೋಜನೆ</th><th>ಬಿಡುಗಡೆ ಮಾಡಲಾದ ಮೊತ್ತ (ಲಕ್ಷಗಳಲ್ಲಿ)</th></tr>
<tr><td>1</td><td>ಬಸವ ವಸತಿ ಯೋಜನೆ</td><td>78.81</td></tr>
<tr><td>2</td><td>ಡಾ.ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾಮೀಣ)</td><td>76.63</td></tr>
<tr><td>3.</td><td>ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)</td><td>5958.30</td></tr>
<tr><td colspan="2">ಒಟ್ಟು</td><td>6113.74</td></tr>
</table>
</td></tr>
</table>

| | | |
|---|---|---|
| ಇ) | ಅರ್ಹ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮ ನಡೆದಿರುವ ಬಗ್ಗೆ ಹಾಗೂ ಜಿಪಿಎಸ್ (GPS) ಫೋಟೋ ಅಪ್ಲೋಡ್ ಮಾಡುವಲ್ಲಿ ತಾಂತ್ರಿಕ ತೊಂದರ ನೀಡಿ ಹಣ ಬಿಡುಗಡೆ ವಿಳಂಬ ಮಾಡುತ್ತಿರುವ ಬಗ್ಗೆ ದೂರುಗಳು ಬಂದಿದೆಯೇ; | ಗ್ರಾಮೀಣ ಪ್ರದೇಶದಲ್ಲಿ ಅರ್ಹ ಫಲಾನುಭವಿಗಳನ್ನು ಗ್ರಾಮಸಭೆ ಮೂಲಕ ಹಾಗೂ ನಗರ ಪ್ರದೇಶದಲ್ಲಿ ನಗರ ಆಶ್ರಯ ಸಮಿತಿ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ. ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮ ನಡೆದಿರುವ ಬಗ್ಗೆ ನಿಗಮಕ್ಕೆ ಸ್ವೀಕೃತವಾಗುವ ದೂರುಗಳಿಗೆ ಸಂಬಂಧಿಸಿದಂತೆ ಮನೆ ಮಾರ್ಗಸೂಚಿಗಳನ್ವಯ ಸೂಕ್ತ ಕ್ರಮ ಕೈಗೊಂಡು ವರದಿ ಸಲ್ಲಿಸುವಂತೆ ಜಿಲ್ಲಾ ಅನುಷ್ಠಾನಾಧಿಕಾರಿಗಳಿಗೆ ತಿಳಿಸಲಾಗಿರುತ್ತದೆ.<br><br>ಜಿಪಿಎಸ್ ಫೋಟೋ ಅಪ್ಲೋಡ್ ಮಾಡುವ ಸಂಬಂಧ ನಿಗಮದ ಸಾಫ್ಟ್ ವೇರ್ ಅನ್ನು ಕಾಲ ಕಾಲಕ್ಕೆ ನವೀಕರಿಸಲಾಗುತ್ತಿದ್ದು, ಎಲ್ಲಾ ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಲಾಗಿರುತ್ತದೆ. ಪ್ರಸ್ತುತ ಜಿಪಿಎಸ್ (GPS) ಫೋಟೋ ಅಪ್ಲೋಡ್ ಮಾಡುವಲ್ಲಿ ಯಾವುದೇ ತಾಂತ್ರಿಕ ತೊಂದರೆ ಇರುವುದಿಲ್ಲ.<br><br>ಆದಾಗ್ಯೂ ತಾಂತ್ರಿಕ ತೊಂದರೆಗಳು ಕಂಡು ಬಂದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ವರದಿ/ಪ್ರಸ್ತಾವನೆಯನ್ನು ಆಧಾರಿಸಿ ಸರಿಪಡಿಸಲು ಕ್ರಮವಹಿಸಲಾಗುತ್ತಿದೆ. |
| ಈ) | ಬಾಕಿ ಇರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ನಿಗಧಿಪಡಿಸಿರುವ ಕಾಲಮಿತಿ ಏನು ಮತ್ತು ಬಿಡುಗಡೆಗೆ ಬಾಕಿ ಇರುವ ಅನುದಾನವನ್ನು ಯಾವಾಗ ಪಾವತಿಸಲಾಗುವುದು? | ಸರ್ಕಾರದ ಮನೆ ಮಾರ್ಗಸೂಚಿಯನ್ವಯ ನಿಗಮದಿಂದ ಕಾಮಗಾರಿ ಆದೇಶ ನೀಡಿದ 90 ದಿನಗಳೊಳಗಾಗಿ ಫಲಾನುಭವಿಯು ಮನೆಯ ಕಾಮಗಾರಿಯನ್ನು ಪ್ರಾರಂಭಿಸಿ ಒಂದು ವರ್ಷದೊಳಗಾಗಿ ಮನೆಯನ್ನು ಪೂರ್ಣಗೊಳಿಸಬೇಕಿರುತ್ತದೆ.<br><br>ಮನೆಗಳಿಗೆ ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗನುಸಾರ ಮತ್ತು ಅನುದಾನದ ಲಭ್ಯತೆಗೆ ಅನುಗುಣವಾಗಿ ಸರ್ಕಾರದ ಸಹಾಯಧನವನ್ನು ಪಾವತಿಸಲಾಗುತ್ತಿದೆ. |

ಸಂಖ್ಯೆ: ವಇ 21 ಹೆಚ್ಎಎಂ 2026

(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು